

ವಿಶ್ವಕಪ್ ವಿಜೇತ ಭಾರತ ವನಿತೆಯರ ಕೊಕ್ಕೊ ತಂಡ

ಆದರೆ ಮಾರ್ಚ್ ತಿಂಗಳಿನಲ್ಲಿ ಈ ಕಾಲಘಟ್ಟದ ಕ್ರಿಕೆಟ್ ದಂತಕತೆಯೇ ಆಗಿರುವ ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಅವರಿಬ್ಬರೂ ಟೆಸ್ಟ್ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದರು. ಇದು ಕ್ರಿಕೆಟ್ ವಲಯದಲ್ಲಿ ಭಾರಿ ಅಚ್ಚರಿಗೆ ಕಾರಣವಾಯಿತು. ಕೋಚ್ ಗಂಭೀರ್ ಮತ್ತು ಈ ಆಟಗಾರರ ನಡುವಿನ ಭಿನ್ನಾಭಿಪ್ರಾಯಗಳಿಂದಾಗಿ ಈ ಸ್ಥಿತಿ ಬಂದಿದೆ ಎಂದು ವಿಶ್ಲೇಷಿಸಲಾಯಿತು. 2024ರಲ್ಲಿ ಟಿ20 ಕ್ರಿಕೆಟ್‌ಗೆ ಇಬ್ಬರೂ ವಿದಾಯ ಹೇಳಿದ್ದರು. ಕೇವಲ ಏಕದಿನ ಕ್ರಿಕೆಟ್‌ಗೆ ತಮ್ಮನ್ನು ಸೀಮಿತಗೊಳಿಸಿದ್ದಾರೆ.

ಇದರಿಂದಾಗಿ ಇಂಗ್ಲೆಂಡ್‌ನಲ್ಲಿ ನಡೆದ ಟೆಸ್ಟ್ ಸರಣಿಯಲ್ಲಿ ಯುವ ಆಟಗಾರ ಶುಭಮನ್ ಗಿಲ್ ಅವರಿಗೆ ನಾಯಕತ್ವ ನೀಡಲಾಯಿತು. ಆ ಸರಣಿಯಲ್ಲಿ ಬಹುತೇಕ ಯುವ ಆಟಗಾರರೇ ಇದ್ದ ಭಾರತ ತಂಡವು ಸಮಬಲ ಸಾಧಿಸಿತು. ಆದರೆ, ತವರಿಗೆ ಮರಳಿದ ನಂತರ ವೆಸ್ಟ್ ಇಂಡೀಸ್ ಎದುರಿನ ಸರಣಿ ಗೆದ್ದ ಭಾರತ ದಕ್ಷಿಣ ಆಫ್ರಿಕಾ ಎದುರು ಮುಗ್ಗರಿಸಿತು. ಇದೇ ವರ್ಷ ವಿಶ್ವ ಟೆಸ್ಟ್ ಚಾಂಪಿಯನ್ ಆಗಿರುವ ದಕ್ಷಿಣ ಆಫ್ರಿಕಾ ತಂಡವು ಭಾರತದ ನೆಲದಲ್ಲಿ ಎರಡು ದಶಕಗಳ ನಂತರ ಟೆಸ್ಟ್ ಸರಣಿ ಜಯಿಸಿತು.

## ಆರ್‌ಸಿಬಿ ಸಂಭ್ರಮ-ದುರಂತ

ಇಂಡಿಯನ್ ಪ್ರೀಮಿಯರ್ ಲೀಗ್ ಕ್ರಿಕೆಟ್ ಟೂರ್ನಿಯಲ್ಲಿ ಅತ್ಯಧಿಕ ಫ್ಯಾನ್ ಫಾಲೋಯಿಂಗ್ ಇರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು 18 ವರ್ಷಗಳ ನಂತರ ಮೊದಲ ಬಾರಿ ಚಾಂಪಿಯನ್ ಆಯಿತು. 'ಈ ಸಲ ಕಪ್ ನಮ್ದೇ' ಎಂದು ಪ್ರತಿವರ್ಷವೂ ಕನವರಿಸುತ್ತಿದ್ದ ಅಪಾರ ಸಂಖ್ಯೆಯ ಅಭಿಮಾನಿಗಳ ಕನಸು ಕೈಗೂಡಿತು. ರಜತ್ ಪಾಟೀದಾರ್ ನಾಯಕತ್ವ ವಹಿಸಿಕೊಂಡ ಮೊದಲ ಟೂರ್ನಿಯಲ್ಲಿಯೇ ತಂಡವು ಸಾಧನೆ ಮಾಡಿತು. ಆದರೆ ಈ ಸಾಧನೆ ಮಾಡಿ 24 ಗಂಟೆ ಕಳೆಯುವಷ್ಟರಲ್ಲಿಯೇ ದುರಂತ ಸಂಭವಿಸಿತು. ಜೂನ್ 4ರಂದು ಆರ್‌ಸಿಬಿ ವಿಜಯೋತ್ಸವದ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತದಲ್ಲಿ 11 ಅಭಿಮಾನಿಗಳು ದುರ್ಮರಣಕ್ಕೀಡಾದರು. ಹಲವರು ಗಾಯಗೊಂಡರು. ರಾಜ್ಯದ ಕ್ರಿಕೆಟ್ ಇತಿಹಾಸದಲ್ಲಿ ಇದು ಕರಾಳ ದಿನವಾಗಿ ದಾಖಲಾಯಿತು.



ನಿಖತ್ ಜರೀನ್

## ಏಷ್ಯಾ ಕಪ್ ವಿಜಯ-ವಿವಾದ

ಪಹಲ್ಗಾಮ್ ಭಯೋತ್ಪಾದನಾ ದಾಳಿಯನ್ನು ಖಂಡಿಸಿದ ಭಾರತ ಕ್ರಿಕೆಟ್ ತಂಡವು ಪಾಕಿಸ್ತಾನದಲ್ಲಿ ಏಷ್ಯಾ ಕಪ್ ಆಡಲು ನಿರಾಕರಿಸಿತು. ಅದರಿಂದಾಗಿ ದುಬೈನಲ್ಲಿ ಪಂದ್ಯಗಳನ್ನು ಆಯೋಜಿಸಲಾಯಿತು. ಈ ಟೂರ್ನಿಯಲ್ಲಿ ಭಾರತ ತಂಡವು ಪಾಕಿಸ್ತಾನ ಎದುರಿನ ಪಂದ್ಯಗಳನ್ನು ಬಹಿಷ್ಕರಿಸಬೇಕು ಎಂಬ ಒತ್ತಾಯಗಳು ಸಾರ್ವಜನಿಕ ವಲಯದಿಂದ ಕೇಳಿಬಂದವು. ಆದರೆ ಸೂರ್ಯಕುಮಾರ್ ಯಾದವ್ ನಾಯಕತ್ವದ ತಂಡವು ಟೂರ್ನಿಯಲ್ಲಿ ಪಾಕ್ ವಿರುದ್ಧ ಆಡಿದ ಮೂರು ಪಂದ್ಯಗಳಲ್ಲಿ ಗೆದ್ದಿತು.

ಆದರೆ ಈ ಪಂದ್ಯಗಳಲ್ಲಿ ಪಾಕ್ ಆಟಗಾರರಿಗೆ ಹಸ್ತಲಾಘವ ಮಾಡುವುದನ್ನು ಭಾರತದ ಆಟಗಾರರು ತಿರಸ್ಕರಿಸಿದರು. ಫೈನಲ್‌ನಲ್ಲಿ ಗೆದ್ದ ಭಾರತ ತಂಡವು ಏಷ್ಯಾ ಕ್ರಿಕೆಟ್ ಕೌನ್ಸಿಲ್ ಅಧ್ಯಕ್ಷರೂ ಆಗಿರುವ ಪಾಕಿಸ್ತಾನದ ಸಚಿವ ಮೊಹಸಿನ್ ನಕ್ವಿಯಿಂದ ಟ್ರೋಫಿ ಸ್ವೀಕರಿಸಲು ಭಾರತ ತಂಡ ನಿರಾಕರಿಸಿತು. ಇದು ದೊಡ್ಡ ಚರ್ಚೆಗೆ ಕಾರಣವಾಯಿತು. ಕ್ರೀಡಾಸ್ಫೂರ್ತಿಯ ಉಲ್ಲಂಘನೆ ಎಂಬ ಟೀಕೆಗಳನ್ನೂ ಭಾರತ ಎದುರಿಸಬೇಕಾಯಿತು. ಟ್ರೋಫಿಯನ್ನು ನಕ್ವಿ ಎಸಿಸಿ ಕಚೇರಿಯಲ್ಲಿಟ್ಟಿದ್ದು ಇದುವರೆಗೂ ಭಾರತಕ್ಕೆ ಹಸ್ತಾಂತರಿಸಿಲ್ಲ.

ಈ ವರ್ಷ ಬಿಸಿಸಿಐಗೆ ಹೊಸ ಅಧ್ಯಕ್ಷರಾಗಿ ಮಾಜಿ ಕ್ರಿಕೆಟಿಗ ಮಿಥುನ್ ಮನ್ಹಾಸ್ ಅವರು ನೇಮಕವಾದರು. ದೇವಜೀತ್ ಸೈಕಿಯಾ ಅವರು ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕದ ರಘುರಾಮ್ ಭಟ್ ಅವರು ಖಜಾಂಚಿಯಾಗಿ ನೇಮಕ ಆಗಿದ್ದಾರೆ. ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಗೆ ನಡೆದ ಚುನಾವಣೆಯಲ್ಲಿ ಮಾಜಿ ಕ್ರಿಕೆಟಿಗ ವೆಂಕಟೇಶ್ ಪ್ರಸಾದ್ ಅಧ್ಯಕ್ಷರಾಗಿ ಆಯ್ಕೆಯಾದರು.

## ಮಹಿಳೆಯರ ಉತ್ತುಂಗ ಸಾಧನೆ

ಭಾರತ ಮಹಿಳಾ ಕ್ರಿಕೆಟ್ ತಂಡವು ಇದೇ ಮೊದಲ ಸಲ ಏಕದಿನ ವಿಶ್ವಕಪ್ ಜಯಿಸಿತು. ಹರ್ಮನ್‌ಪ್ರೀತ್ ಕೌರ್ ನಾಯಕತ್ವದ ತಂಡವು ನವಿ ಮುಂಬೈನಲ್ಲಿ ನಡೆದ ಫೈನಲ್‌ನಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಜಯಿಸಿತು.

ಬೆಂಗಳೂರಿನ ನಿಕಿ ಪ್ರಸಾದ್ ನಾಯಕಿಯಾಗಿದ್ದ 19 ವರ್ಷದೊಳಗಿನವರ ಮಹಿಳಾ ಕ್ರಿಕೆಟ್ ತಂಡವೂ ಟಿ20 ವಿಶ್ವಕಪ್ ಜಯಿಸಿತು. ಫೆಬ್ರುವರಿಯಲ್ಲಿ ಮಲೇಷ್ಯಾದಲ್ಲಿ ಈ ಟೂರ್ನಿ ನಡೆದಿತ್ತು.

ಇನ್ನೊಂದೆಡೆ ಅಂಧ ಮಹಿಳೆಯರ ಭಾರತ ಕ್ರಿಕೆಟ್ ತಂಡವೂ ಶ್ರೀಲಂಕಾದಲ್ಲಿ ನಡೆದ ವಿಶ್ವಕಪ್ ಟೂರ್ನಿಯಲ್ಲಿ ಚಾಂಪಿಯನ್ ಆಗಿ ಹೊರಹೊಮ್ಮಿತು. ಈ ತಂಡಕ್ಕೆ ಕರ್ನಾಟಕದ ಟಿ.ಸಿ. ದೀಪಿಕಾ ನಾಯಕಿಯಾಗಿದ್ದರು.

ಕ್ರಿಕೆಟ್ ಅಷ್ಟೇ ಅಲ್ಲ; ಮಹಿಳೆಯರ ಕೊಕ್ಕೊ ತಂಡವೂ ಈ ಬಾರಿ ಚೊಚ್ಚಲ ವಿಶ್ವಕಪ್ ಜಯಿಸಿದ ಸಾಧನೆ ಮಾಡಿತು.

ಅಪರೂಪಕ್ಕೆಂಬಂತೆ ಈ ಬಾರಿ ಭಾರತದ ಮಹಿಳಾ ಐಸ್ ಹಾಕಿ ತಂಡವೂ ಏಷ್ಯಾ ಕಪ್ ಕಂಚಿನ ಪದಕ ಗೆದ್ದ ಸಾಧನೆ ಹೆಚ್ಚು ಸದ್ದು ಮಾಡಲಿಲ್ಲ. ಆದರೆ ಅತ್ಯಂತ ಕಠಿಣ ಪರಿಸ್ಥಿತಿಯಲ್ಲಿಯೂ ಈ ಸಾಧನೆ ಮಾಡಿದ ವನಿತೆಯರು ಜಗದ ಗಮನ ಸೆಳೆದರು.



ದಿವ್ಯಾ ದೇಶಮುಖ